ದಿನಾಂಕಃ**11-06-2026** ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣವಚನ ಮಾಡಿಸಲಾಯಿತು.

ಮುಖ್ಯವಿಚಾರಣೆಃ ಅರ್ಜಿದಾರರ ಪರ ಶ್ರೀ ಬಿ .ಕೆ .ವಿ ವಕೀಲರಿಂದಃ

ನಾನು ಈ ಅರ್ಜಿಯಲ್ಲಿ 1 ನೇ ಅರ್ಜಿದಾರಳಾಗಿದ್ದು, ನನ್ನ ಸಾಕ್ಷ್ಯದ ಮುಖ್ಯವಿಚಾರಣೆಯಾಗಿ ಪ್ರಮಾಣಪತ್ರವನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ . ಪ್ರಮಾಣಪತ್ರದಲ್ಲಿ ಬರೆದಿರುವ ವಿಷಯಗಳು ನನಗೆ ತಿಳಿದಿದೆ ಮತ್ತು ಸತ್ಯವಾಗಿದೆ.

ನಾನು ಈ ದಿನ ನನ್ನ ಚುನಾವಣಾ ಗುರುತಿನ ಚೀಟಿ ನೋಟರಿ ದೃಢೀಕೃತ ಪ್ರತಿ ಹಾಜರು ಪಡಿಸುತ್ತಿದ್ದು ಅದನ್ನು ನಿಪಿ-1, ನನ್ನ ಪಡಿತರ ಚೀಟಿಯ ನೋಟರಿ ದೃಢೀಕೃತ ಪ್ರತಿ ಹಾಜರು ಪಡಿಸುತ್ತಿದ್ದು ಅದನ್ನು ನಿಪಿ-2, ನನ್ನ ಆಧಾರ್ ಕಾರ್ಡ್ ನ ನೋಟರಿ ದೃಢೀಕೃತ ಪ್ರತಿ ಹಾಜರು ಪಡಿಸುತ್ತಿದ್ದು ಅದನ್ನು ನಿಪಿ-3, ನನ್ನ ಸೊಸೆ/2 ನೇ ಅರ್ಜಿದಾರರ ಆಧಾರ್ ಕಾರ್ಡ್ ನ ನೋಟರಿ ದೃಢೀಕೃತ ಪ್ರತಿ ಹಾಜರು ಪಡಿಸುತ್ತಿದ್ದು ಅದನ್ನು ನಿಪಿ-4, ನನ್ನ ಮಗನ ಮರಣ ಪ್ರಮಾಣ ಪತ್ರ ಹಾಜರುಪಡಿಸುತ್ತಿದ್ದು ಅದನ್ನು ನಿಪಿ-5, ಉಪ ತಹಶೀಲ್ದಾರ್, ಹರಿಹರಪುರ ಹೋಬಳಿ ಇವರು ನೀಡಿದ ಕುಟುಂಬ ಸದಸ್ಯರ ದೃಢೀಕರಣ ಪತ್ರ ಹಾಜರುಪಡಿಸುತ್ತಿದ್ದು ಅದನ್ನು ನಿಪಿ-6, ಉಪ ತಹಶೀಲ್ದಾರ್, ಹರಿಹರಪುರ ಹೋಬಳಿ ಇವರು ನೀಡಿದ ಮೃತರ ವಾರಸುದಾರರ ದೃಢೀಕರಣ ಪತ್ರ ಹಾಜರುಪಡಿಸುತ್ತಿದ್ದು ಅದನ್ನು ನಿಪಿ-7, ಎಸ್.ಬಿ.ಐ. ಲೈಫ್ ಇನ್ಸುರೆನ್ಸ್ ಪ್ರತಿ ಹಾಜರುಪಡಿಸುತ್ತಿದ್ದು ಅದನ್ನು ನಿಪಿ-8, ವಿಜಯ ಕರ್ನಾಟಕ ಪತ್ರಿಕಾ ಪ್ರಕಟಣೆಯ ಪ್ರತಿ ಹಾಜರುಪಡಿಸುತ್ತಿದ್ದು ಅದನ್ನು ನಿಪಿ-9 ಎಂದು ಗುರುತಿಸಲಾಯಿತು. ( ನಿಪಿ-3 ಮತ್ತು 4 ರ ಮೂಲ ಪ್ರತಿಯನ್ನು ಪರಿಶೀಲಿಸಿ ಪುನಃ ಅರ್ಜಿದಾರರಿಗೆ ಮರಳಿ ನೀಡಲಾಯಿತು)

ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಸಮಯ ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸ ಇ ಎ ಒ

Sd/-
ಹಿರಿಯ ಸಿವಿಲ್ ನ್ಯಾಯಾಧೀಶರುಃ ನ.ರಾ.ಪುರ,
ಸಂಚಾರಿ ನ್ಯಾಯಾಲಯ, ಕೊಪ್ಪ.

ಸಾಕ್ಷಿದಾರರ ಸಹಿಃ